ಅನುಬಂಧ–I

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಗಳು

ಶ್ರೀರಂಗಪಟ್ಟಣದ ಅರಕೆರೆ ಗ್ರಾಮದಲ್ಲಿ ಪಶು ವೈದ್ಯಕೀಯ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

29(226): ಶ್ರೀ ರಮೇಶ ಬಂಡಿ ಸಿದ್ದೇಗೌಡ ಎ. ಜಿ. (ಶ್ರೀರಂಗಪಟ್ಟಣ): ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶ್ರೀರಂಗಪಟ್ಟಣ ತಾಲ್ಲೂಕಿನ ಅರಕೆರೆ ಗ್ರಾಮದಲ್ಲಿ ಪಶು ಚಿಕಿತ್ಸಾಲಯವಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಈ ಚಿಕಿತ್ಸಾಲಯವನ್ನು ಮೇಲ್ದರ್ಜೆಗೇರಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯನ್ನು ಎಂದು ಜಾರಿಗೆ ತರಲಾಗುವುದು?

ಶ್ರೀ ರೇವುನಾಯಕ್ ಬೆಳಮಗಿ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು)

ಅ) ಹೌದು.

ಆ) ಪಶು ಚಿಕಿತ್ಸಾಲಯವನ್ನು ಪಶು ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಬೇಕಾದಲ್ಲಿ ಹಾಲಿ ಇರುವ ಅಧಿಕಾರಿ ವೃಂದದ ಪಶು ವೈದ್ಯಾಧಿಕಾರಿ ಹುದ್ದೆಯನ್ನು ಸಹಾಯಕ ನಿರ್ದೇಶಕರ ಹುದ್ದೆಗೆ ಮೇಲ್ದರ್ಜೆಗೇರಿಸಬೇಕಾಗುತ್ತದೆ. ಹಾಗೂ ಸಿಬ್ಬಂದಿ ವರ್ಗದಲ್ಲಿ ದ್ವಿತೀಯ ದರ್ಜೆ ಸಹಾಯಕ ಹಾಗೂ ಪಶುವೈದ್ಯಕೀಯ ಮೇಲ್ವಿಚಾರಕರ ಹುದ್ದೆಗಳನ್ನು ಹೊಸದಾಗಿ ಸೃಜಿಸಬೇಕಾಗುತ್ತದೆ.

2010–11ನೇ ಸಾಲಿನಲ್ಲಿ ಅನುದಾನದ ಲಭ್ಯತೆಯನ್ನಾಧರಿಸಿ ಪಶುವೈದ್ಯಾಧಿಕಾರಿ ಹುದ್ದೆಯನ್ನು ಉನ್ನತೀಕರಿಸಲು ಹಾಗೂ ದ್ವಿತೀಯ ದರ್ಜೆ ಸಹಾಯಕರ ಪಶುವೈದ್ಯಕೀಯ ಮೇಲ್ವಿಚಾರಕರ ಹುದ್ದೆಗಳನ್ನು ಹೊಸದಾಗಿ ಸೃಜಿಸಿ ಅರೆಕೆರೆ ಗ್ರಾಮದ ಪಶುಚಿಕಿತ್ಸಾಲಯವನ್ನು ಪಶು ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದು.